**ದಿನಾಂಕ: 20.03.2021 ರಂದು 10-30 ಕ್ಕೆ ಡಾ. ಸುರೇಶ್, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-179 (ಶಾಖಾಂಬರಿನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-179ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

### : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 179ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಬೆಸ್ಕಾಂ ಅಭಿಯಂತರರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಬೀದಿ ದೀಪ ನಿರ್ವಹಣಾ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ರಸ್ತೆ ಮೂಲಭೂತ ಸೌಕರ್ಯ (ದಕ್ಷಿಣ) |
| ಸದಸ್ಯರುಗಳು | ಯೋಜನೆ (ದಕ್ಷಿಣ) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಬೃಹತ್ ನೀರುಗಾಲುವೆ ಅಭಿಯಂತರರು |
| ಸದಸ್ಯರುಗಳು | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| ಸದಸ್ಯರುಗಳು | ನಾಗರೀಕ ಕಲ್ಯಾಣ ಸಂಘ |

## :ನಡಾವಳಿಯ ವರದಿ:

- ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಅನುಷಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಜೆ.ಪಿ.ನಗರ ಉಪವಿಭಾಗ ರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

*ಪು.ತಿ.ನೋ.*

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 9ನೇ ಮುಖ್ಯರಸ್ತೆ, 37ನೇ ಅಡ್ಡರಸ್ತೆ, ಗುಡ್ ಶೆಫರ್ಡ್ ಎದುರು ಬಿದ್ದಿರುವ ಒಣತ್ಯಾಜ್ಯವನ್ನು ಸಂಬಂಧಪಟ್ಟ ಅಧಿಕಾರಿಗಳಿಂದ ತೆರವುಗೊಳಿಸುವಂತೆ ಚರ್ಚಿಸಲಾಯಿತು.

- 47ನೇ ಅಡ್ಡರಸ್ತೆ, ಜಯನಗರ 8ನೇ ಬಡಾವಣೆಯಲ್ಲಿ ಬಿಡಬ್ಲ್ಯೂಎಸ್ಎಸ್‌ಬಿ ಕಾಮಗಾರಿ ಮತ್ತು ಎಸ್‌ಡಬ್ಲ್ಯೂಡಿ ಕಾಮಗಾರಿಯನ್ನು ವೇಗವಾಗಿ ನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಲಾಯಿತು.

- 25ನೇ, 26ನೇ ಮತ್ತು 27ನೇ ಮುಖ್ಯರಸ್ತೆಯ ಎಲ್ಐಸಿ ಕಾಲೋನಿಯಲ್ಲಿ ಬಿಡಬ್ಲ್ಯೂಎಸ್ಎಸ್‌ಬಿ ಮ್ಯಾನ್‌ಹೋಲ್‌ಗಳಲ್ಲಿರುವ ಹೂಳಅನ್ನು ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಜೆ.ಪಿ.ನಗರ) ಉಪವಿಭಾಗದ ಶ್ರೀಮತಿ ಅನುಷಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Anusha A M.

| | |
|---|---|
| **ವಾರ್ಡ್ ಸಮಿತಿ ಅಧ್ಯಕ್ಷರು** | **ಸದಸ್ಯ ಕಾರ್ಯದರ್ಶಿ ಹಾಗೂ** |
| **ಹಾಗೂ ವಾರ್ಡಿನ ನೋಡಲ್ ಅಧಿಕಾರಿ** | **ಸಹಾಯಕ ಅಭಿಯಂತರರು ವಾರ್ಡ್ 179** |
| **ವಾರ್ಡ್ ನಂ. 179 ಶಾಖಾಂಬರಿನಗರ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |